## ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 55 ಡಿಪಿಐ 2014

ಕರ್ನಾಟಕ ಸರ್ಕಾರದ ಸಚಿವಾಲಯ,
– ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:19–06–2014.

## ಅಧಿಸೂಚನೆ

ವಿಷಯ:– ಸಾರ್ವಜನಿಕ ಶಿಕ್ಷಣ ಇಲಾಖೆಯ, ಸಹ ನಿರ್ದೇಶಕರು ವೃಂದದ ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ–ದಿನಾಂಕ:01/01/2013 ರಲ್ಲಿದ್ದಂತೆ.

* * * *

ಸಾರ್ವಜನಿಕ ಶಿಕ್ಷಣ ಇಲಾಖೆಯ, ಸಹ ನಿರ್ದೇಶಕರು ವೃಂದದ ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:01/01/2013 ರಲ್ಲಿರುವಂತೆ ತಯಾರಿಸಿ, ಲಗತ್ತಿಸಿರುವ ಅನುಬಂಧದಲ್ಲಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಇದರಿಂದ ಭಾದಿತರಾಗಬಹುದಾದಂತಹ ಅಧಿಕಾರಿಗಳು ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ತಮ್ಮ ಆಕ್ಷೇಪಣೆ/ಸಲಹೆ/ಸೂಚನೆಗಳಿದ್ದಲ್ಲಿ, ಅದನ್ನು ಸಮರ್ಥಿಸುವಂತಹ ದಾಖಲೆಗಳೊಂದಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರಿಗೆ ಸಲ್ಲಿಸಿ, ಅದರ ಪ್ರತಿಯನ್ನು ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇವರಿಗೆ ಸಲ್ಲಿಸುವುದು. ಈ ನಿಗಧಿತ ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳು/ ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜೆ.ಆರ್. ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, (ಆಡಳಿತ).

ಇವರಿಗೆ:–
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

ಪ್ರತಿ ಇವರಿಗೆ:–
1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ.
4) ಸಂಬಂಧಪಟ್ಟ ಅಧಿಕಾರಿಗಳಿಗೆ (ಆಯುಕ್ತರು, ಸಾ.ಶಿ.ಇ, ಇವರ ಮುಖಾಂತರ)
5) ಶಾಖಾರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.